ದಿಃ 13.08.2026.

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ.1018/2020**

**ಪ್ರಾ.ಸಾಃ7**

**ಚಾಸಾಃ7**

| | | |
|---|---|---|
| ಸಾಕ್ಷಿಯ ಹೆಸರು | : | ಕುಮಾರಪ್ಪ |
| ತಂದೆಯ ಹೆಸರು | : | ಕೃಷ್ಣಪ್ಪ |
| ವಯಸ್ಸು | : | 33 ವರ್ಷ |
| ಕೆಲಸ | : | ವ್ಯವಸಾಯ |
| ವಾಸ | : | ರಂಗಾಪುರ ಗ್ರಾಮ |

**ದಿಃ13.08.2026 ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಚಾಸಾ-4 ಮತ್ತು 6 ಗೊತ್ತು, ಅವರು ನಮ್ಮ ಗ್ರಾಮಸ್ಥರು.

ಸಾಕ್ಷಿಗೆ ನಿಪಿ-3 ನ್ನು ತೋರಿಸಲಾಗಿ, ಸಾಕ್ಷಿ ಸದರಿ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೊಲೀಸರು ಮಹಜರಿಗೆ ಬಂದಿರುತ್ತೇವೆ ಸಾಕ್ಷಿಯಾಗಿ ಸಹಿ ಮಾಡಿ ಎಂದು ಸಹಿ ಪಡೆದಿರುತ್ತಾರೆ. ಏನು ಬರೆದಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ಆ ಸಮಯದಲ್ಲಿ ಪೊಲೀಸರು ಏನು ಮಾಡಿರುತ್ತಾರೆ ಎಂದು ತಿಳಿದಿರುವುದಿಲ್ಲ. ಘಟನಾ ಸ್ಥಳವನ್ನು ಯಾರು ತೋರಿಸಿರುತ್ತಾರೆ ಎಂದು ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

ದಿನಾಂಕ 15.02.2012 ರಂದು ಶಿವಲಿಂಗಪ್ಪರವರ ಮನೆಯ ಮುಂದೆ ಪೊಲೀಸರು ಮಹಜರನ್ನು ಜರುಗಿಸಲು ಬಂದಿದ್ದರು ಎಂದರೆ ಸರಿಯಲ್ಲ. ಚಾಸಾ-4 ರವರು ಸ್ಥಳ

ದಿ: 13.08.2026.

ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ-4 ರವರು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ಮಹಜರ ಕ್ರಮ ಜರುಗಿಸಿ ನನಗೆ ಓದಿ ಹೇಳಿ ನಾನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಇರುವುದಿಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.